ಚಿಕ್ಕನಾಯಕನಹಳ್ಳಿಯಲ್ಲಿ ಆಶ್ರಮಶಾಲೆಗೆ ಸ್ವಂತ ಕಟ್ಟಡ ನಿರ್ಮಿಸುವುದು

283 (232): ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರದಲ್ಲಿರುವ ಆಶ್ರಮ ಶಾಲೆಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸ್ವಂತ ಕಟ್ಟಡ ನಿರ್ಮಿಸಲು ವಿಳಂಬವಾಗುತ್ತಿರುವ ಕಾರಣಗಳೇನು;

ಇ) ಇನ್ನಷ್ಟು ದಿನಗಳೊಳಗೆ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಕೇಂದ್ರ ಪುರಸ್ಕೃತ ಯೋಜನೆಯಡಿ 50% ಕೇಂದ್ರದ ಪಾಲು ಪಡೆಯಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನ ಬಿಡುಗಡೆಯಾದ ಕೂಡಲೇ ರಾಜ್ಯದ ಪಾಲಿನೊಂದಿಗೆ ಕಟ್ಟಡ ನಿರ್ಮಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಇ) ಕೇಂದ್ರ ಪುರಷ್ಕೃತ ಯೋಜನೆಯಡಿ ಅನುದಾನ ಬಿಡುಗಡೆಯಾದ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಗಣಿ ಕೈಗಾರಿಕೆ ನಡೆಸುತ್ತಿರುವ ಪ್ರದೇಶಗಳು

284 (233): ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳು ಯಾವುವು;

ಆ) ಯಾವ ಯಾವ ಕಂಪನಿ ಅಥವಾ ಗುತ್ತಿಗೆದಾರರಿಗೆ ಪರವಾನಿಗೆ ನೀಡಲಾಗಿದೆ; ಎಷ್ಟು ಎಕರೆ ಪ್ರದೇಶವನ್ನು ಗುತ್ತಿಗೆ ನೀಡಲಾಗಿದೆ;

ಇ) ಪರವಾನಿಗೆ ಪಡೆದವರು ಸರ್ಕಾರಕ್ಕೆ ಪೂರ್ಣವಾಗಿ ರಾಯಲ್ಟಿ ಪಾವತಿ ಮಾಡಿದ್ದಾರೆಯೇ;

ಈ) ಪೂರ್ಣ ರಾಯಲ್ಟಿ ಪಾವತಿ ಮಾಡದಿದ್ದರೆ ಅವರ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಒಟ್ಟು 34 ಪ್ರದೇಶಗಳಲ್ಲಿ ಗಣಿಗಾರಿಕೆ ನಡೆಯುತ್ತಿದೆ. ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳ ಪಟ್ಟಿಯನ್ನು ಅನುಬಂಧ– 1ರಲ್ಲಿ ನೀಡಿದೆ.

ಆ) ಪರವಾನಗಿ ನೀಡಿರುವ ಗಣಿ ಗುತ್ತಿಗೆಗಳ ವಿವರವನ್ನು ಅನುಬಂಧ– 2ರಲ್ಲಿ ನೀಡಿದೆ.

ಇ) ಹೌದು.

ಈ) ಪೂರ್ಣ ರಾಯಲ್ಟಿ ಪಾವತಿ ಮಾಡದಿದ್ದಲ್ಲಿ ಅಂತಹ ಗುತ್ತಿಗೆದಾರರಿಗೆ ನೋಟೀಸು ನೀಡಿ ಬಾಕಿ ವಸೂಲಿ ಮಾಡಲಾಗುತ್ತಿದೆ. ತಪ್ಪಿದಲ್ಲಿ, ಗಣಿ ಗುತ್ತಿಗೆ ರದ್ದುಪಡಿಸಿ, ಬಾಕಿಯನ್ನು ಭೂಕಂದಾಯದಂತೆ ವಸೂಲಿ ಮಾಡಲಾಗುತ್ತಿದೆ.